# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :1173 |
| ಉತ್ತರಿಸಬೇಕಾದ ದಿನಾಂಕ | : 19.12.2024 |
| ಸದಸ್ಯರ ಹೆಸರು | : ಶ್ರೀ ಭೀಮರಾವ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯ ತಾಲ್ಲೂಕುಗಳ ಕ್ರೀಡಾಂಗಣ ವಿಲ್ಲದೆ ಕ್ರೀಡಾಪಟುಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; | ಹೌದು.<br><br>ಬೀದರ್ ಜಿಲ್ಲೆಯಲ್ಲಿ ಜಿಲ್ಲಾ ಕ್ರೀಡಾಂಗಣ ಹಾಗೂ ಬಸವಕಲ್ಯಾಣ, ಔರಾದ್ ಮತ್ತು ಹುಮ್ನಾಬಾದ್‌ನಲ್ಲಿ ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ.<br><br>ಬೀದರ್ ಜಿಲ್ಲೆಯಲ್ಲಿ ಕ್ರೀಡಾಂಗಣಗಳಿಲ್ಲದ ಭಾಲ್ಕಿ, ಚಿಟಗುಪ್ಪ, ಹುಲಸೂರು ಮತ್ತು ಕಮಲನಗರ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಿಸಲು ಸೂಕ್ತ ನಿವೇಶನವನ್ನು ಒದಗಿಸುವಂತೆ ಜಿಲ್ಲಾಧಿಕಾರಿಗಳು, ಬೀದರ್ ಇವರಿಗೆ ತಿಳಿಸಲಾಗಿದೆ. |
| ಆ) | ಸದರಿ ಜಿಲ್ಲೆಯ ತಾಲ್ಲೂಕುಗಳಲ್ಲಿ ಹೊಸ ಕ್ರೀಡಾಂಗಣ ನಿರ್ಮಾಣಕ್ಕಾಗಿ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಬೀದರ್ ಜಿಲ್ಲೆಯ ಕ್ರೀಡಾಂಗಣಗಳಿಲ್ಲದ ತಾಲ್ಲೂಕುಗಳಲ್ಲಿ ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲು ಉದ್ದೇಶಿಸಿ ಭಾಲ್ಕಿ, ಚಿಟಗುಪ್ಪ, ಹುಲಸೂರು ಮತ್ತು ಕಮಲಾನಗರ ತಾಲ್ಲೂಕು ಕೇಂದ್ರಗಳ ವ್ಯಾಪ್ತಿಯಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲು ಸುಮಾರು 6 ರಿಂದ 8 ಎಕರೆ ಸೂಕ್ತ ನಿವೇಶನವನ್ನು ಗುರುತಿಸಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಿಕೊಳ್ಳಲು ಕ್ರಮವಹಿಸಲಾಗುತ್ತಿದೆ.<br>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ನಿವೇಶನವು ಹಸ್ತಾಂತರವಾದ ನಂತರ ಅನುದಾನದ ಲಭ್ಯತೆ ಆಧರಿಸಿ ಕ್ರೀಡಾಂಗಣ ನಿರ್ಮಾಣಕ್ಕೆ ಪರಿಗಣಿಸಲಾಗುವುದು. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/123/2024**

**( ಸಿದ್ದರಾಮಯ್ಯ )**
ಮುಖ್ಯಮಂತ್ರಿ